ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಗುರುವಾರ, ದಿನಾಂಕ: ೦೨ನೇ ಜುಲೈ, ೨೦೧೫**

---

**ಸಮೂಹ – IV**

೧. ಮುಖ್ಯಮಂತ್ರಿಗಳು
೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು
೩. ಗೃಹ ಸಚಿವರು
೪. ನಗರಾಭಿವೃದ್ಧಿ ಸಚಿವರು
೫. ಸಣ್ಣ ಕೈಗಾರಿಕೆ ಸಚಿವರು

---

## ಕೆ.ಐ.ಎ.ಡಿ.ಬಿ. ವತಿಯಿಂದ ವಶಪಡಿಸಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೬ (೫೫೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಕಳೆದ ಎರಡು ವರ್ಷದಿಂದ ಇದುವರೆವಿಗೂ ಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು ; ಈ ಜಮೀನಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದವರ ಎಷ್ಟು ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ;

(ಆ) ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿ.ಗೆ ಜಮೀನು ಹಸ್ತಾಂತರಿಸಲು ಇರುವ ನಿಯಮಗಳು ಯಾವುವು ;

(ಇ) ರೈತರ ವಿರೋಧದ ನಡುವೆಯು ಸರ್ಕಾರ ರೈತರಿಂದ ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಂಡಿದೆ ; ಹಾಗಿದ್ದಲ್ಲಿ, ರೈತರ ಜಮೀನುಗಳಿಗೆ ಸರಿಯಾದ ಪರಿಹಾರ ನೀಡಲಾಗಿದೆಯೇ ? (ವಿವರ ಒದಗಿಸುವುದು)

## ಸಿಎಜಿ ವರದಿಯನ್ವಯ ಅವ್ಯವಹಾರದ ಪ್ರಕರಣಗಳನ್ನು ತನಿಖೆಗೆ ವಹಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭ (೪೬೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೧೦ ವರ್ಷಗಳಲ್ಲಿ ಸರ್ಕಾರಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರ ವರದಿ ಬಂದಿರುವ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಎಷ್ಟು ವರದಿಯಲ್ಲಿ ಅವ್ಯವಹಾರ ನಡೆದಿರುವುದನ್ನು ಸರ್ಕಾರ ಗಮನಿಸಿದೆ; (ವಿವರ ನೀಡುವುದು)

(ಇ) ಹಾಗಿದ್ದರೆ, ಎಷ್ಟು ವರದಿಗಳಲ್ಲಿನ ಅವ್ಯವಹಾರದ ಬಗ್ಗೆ ಸರ್ಕಾರ ಲೋಕಾಯುಕ್ತ/ಸಿ.ಐ.ಡಿ. ತನಿಖೆಗೆ ನೀಡಿದೆ ; (ವಿವರ ನೀಡುವುದು)

(ಈ) ಅಂತಹ ಸಿ.ಐ.ಡಿ. ವರದಿಯನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರ ಲೋಕಾಯುಕ್ತಕ್ಕೆ ಮಂಡಿಸಿದೆಯೇ ? (ವಿವರ ನೀಡುವುದು)

## ಗದಗ ಜಿಲ್ಲೆಯ ವಿವಿಧ ಪೊಲೀಸ್ ಸ್ಟೇಷನ್‌ಗಳಲ್ಲಿ ದರೋಡೆ ಹಾಗೂ ಅತ್ಯಾಚಾರ ಪ್ರಕರಣ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೪೮ (೫೦೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಗದಗ ಶಹರ, ಗದಗ ಗ್ರಾಮೀಣ, ಮುಂಡರಗಿ, ಶಿರಹಟ್ಟಿ, ರೋಣ, ನರಗುಂದ ತಾಲ್ಲೂಕುಗಳಲ್ಲಿ ಇರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ; ಪ್ರತಿ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಕೊರತೆ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರಣೆ ನೀಡುವುದು)

(ಆ) ಜನವರಿ ೨೦೧೪ ರಿಂದ ಇಲ್ಲಿಯವರೆಗೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಪ್ರತಿ ಪೊಲೀಸ್ ಠಾಣೆಗಳಲ್ಲಿ ಮನೆ, ಅಂಗಡಿಗಳ ದರೋಡೆ, ಮಹಿಳೆ ಮತ್ತು ಮಕ್ಕಳ ಮೇಲಿನ ಅತ್ಯಾಚಾರ, ಕೊಲೆ ಪ್ರಕರಣಗಳು, ಸರಗಳ್ಳತನ ಪ್ರಕರಣಗಳು ಎಷ್ಟು ದಾಖಲಾಗಿವೆ ;

(ಇ) ಸದರಿ ಪ್ರಕರಣಗಳ ಕುರಿತು ತನಿಖೆಯು ಯಾವ ಹಂತದಲ್ಲಿದೆ ; ಆ ಪೈಕಿ ಶಿಕ್ಷೆಗೊಳಪಟ್ಟ ಪ್ರಕರಣಗಳ ಸಂಖ್ಯೆ ಎಷ್ಟು ? (ಪ್ರಕರಣವಾರು ವಿವರ ನೀಡುವುದು)

## ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯ (೫೧೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತ್ಯಾಚಾರ ಪ್ರಕರಣಗಳು ಹೆಚ್ಚಾಗುತ್ತಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ದಾಖಲಾದ ಅತ್ಯಾಚಾರ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳಲ್ಲಿ ಅತ್ಯಾಚಾರಿಗಳಿಗೆ ಶಿಕ್ಷೆ ವಿಧಿಸಲಾಗಿದೆ ;

(ಇ) ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವಲ್ಲಿ ಸರಕಾರ ಕೈಗೊಂಡ ಕ್ರಮಗಳೇನು; ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟಲು ವಿಶೇಷ ತಂಡವನ್ನು ರಚಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಈ) ಶಾಲಾ ಕಾಲೇಜುಗಳಲ್ಲಿ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವಲ್ಲಿ ಸರಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಭ್ರಷ್ಟ ಅಧಿಕಾರಿಗಳ ವಿಚಾರಣೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೫೦ (೪೭೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕಾಯುಕ್ತ ಹಾಗೂ ಉಪಲೋಕಾಯುಕ್ತರು ಇಲ್ಲಿಯವರೆಗೆ ಭ್ರಷ್ಟಾಚಾರ ಆರೋಪಕ್ಕೆ ಒಳಗಾಗಿರುವ ಎಷ್ಟು ಅಧಿಕಾರಿಗಳ ಮೇಲೆ ವಿಚಾರಣೆ ನಡೆಸಲು ಅನುಮತಿಗಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ ;

(ಆ) ಸಲ್ಲಿಸಿದ್ದಲ್ಲಿ, ಎಷ್ಟು ಅಧಿಕಾರಿಗಳ ಮೇಲೆ ವಿಚಾರಣೆಗೆ ಅನುಮತಿ ನೀಡಲಾಗಿದೆ; ಆ ಪೈಕಿ ಎಷ್ಟು ಅಧಿಕಾರಿಗಳಿಗೆ ಶಿಕ್ಷೆಯಾಗಿದೆ, ಎಷ್ಟು ಜನ ಖುಲಾಸೆ ಗೊಂಡಿರುತ್ತಾರೆ ? (ವಿವರ ನೀಡುವುದು)

## ಪಿ.ಇ.ಬಿ. ನಡವಳಿಗಳಿಗೆ ವಿರುದ್ಧವಾಗಿ ಕಾರ್ಯಕಾರಿಣಿ ಹುದ್ದೆಗಳಲ್ಲಿ ಮುಂದುವರೆಸಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೫೧ (೪೬೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕ್ರಿಮಿನಲ್ ಕೇಸು ಇಲಾಖಾ ವಿಚಾರಣೆ ಮತ್ತು ಚಾಲ್ತಿ ಶಿಕ್ಷೆ ಬಾಕಿ ಇರುವ ಪೊಲೀಸ್ ಅಧಿಕಾರಿಗಳನ್ನು ಪಿ.ಇ.ಬಿ. (Police Establishment Board) ನಡವಳಿಗೆ ವಿರುದ್ಧವಾಗಿ ಕಾರ್ಯಕಾರಿಣಿ (ಎಕ್ಸಿಕ್ಯೂಟೀವ್) ಹುದ್ದೆಗೆ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಯಾವ ಯಾವ ಪೊಲೀಸ್ ಅಧಿಕಾರಿಗಳನ್ನು ಪಿ.ಇ.ಬಿ. ನಡವಳಿಗಳ ವಿರುದ್ಧವಾಗಿ ಕಾರ್ಯಕಾರಿಣಿ ಹುದ್ದೆಗಳಲ್ಲಿ ಮುಂದುವರೆಸಲಾಗಿದೆ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಪಿ.ಇ.ಬಿ. ನಡವಳಿಗಳು ಯಾವ ಯಾವ ಗ್ರೇಡ್‌ನ ನೌಕರರಿಗೆ / ಅಧಿಕಾರಿಗಳಿಗೆ ಅನ್ವಯಿಸುತ್ತದೆ ?

## ರಾಯಚೂರು ಜಿಲ್ಲೆಯಲ್ಲಿ ಭಾರಿ ಪ್ರಮಾಣದ ಕೈಗಾರಿಕೆಗಳ ಸ್ಥಾಪನೆಯ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೫೨ (೪೮೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ''ಕೈಗಾರಿಕಾ ಲ್ಯಾಂಡ್‌ಬ್ಯಾಂಕ್'' ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸಂಗ್ರಹ ಮಾಡಲು ಉದ್ದೇಶಿಸಲಾಗಿದೆ;

(ಇ) ರಾಯಚೂರಿನಲ್ಲಿ ಭಾರಿ ಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ರಾಯಚೂರಿನ ಗ್ರೋತ್ (Growth) ಸೆಂಟರ್‌ನಲ್ಲಿ ಮೂಲಭೂತ ಸೌಲಭ್ಯಗಳು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಮಹಾನಗರ ಪಾಲಿಕೆಗೆ ಹೆಚ್ಚುವರಿ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೫೩ (೫೪೮) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಹಿಂದುಳಿದ ಜಿಲ್ಲೆಗಳಾದ ಕಲಬುರಗಿ ಹಾಗೂ ಬಳ್ಳಾರಿ ಮಹಾನಗರ ಪಾಲಿಕೆಗೆ ೨೦೧೪–೧೫ ಹಾಗೂ ೨೦೧೫–೧೬ನೇ

ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಹಾಗೂ ಹೆಚ್ಚುವರಿ ಅನುದಾನವೆಷ್ಟು ; ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿದ್ದಲ್ಲಿ, ಅದರ ಮೊತ್ತವೆಷ್ಟು ;

(ಆ) ಸದರಿ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಬಳಕೆ ಮಾಡಲಾಗಿದೆ; (ಕ್ಷೇತ್ರವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ಮುಕ್ತಾಯಗೊಂಡ, ಪ್ರಗತಿಯಲ್ಲಿರುವ ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಪ್ರಗತಿಯಲ್ಲಿರುವ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ? (ವಿವರ ನೀಡುವುದು)

## ಪಶು ಚಿಕಿತ್ಸಾ ಕೇಂದ್ರಗಳ ಕೊರತೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೫೪ (೫೨೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪಶು ಚಿಕಿತ್ಸಾ ಕೇಂದ್ರಗಳ ಕೊರತೆಗಳಿಂದ ಜಾನುವಾರುಗಳಿಗೆ ಚಿಕಿತ್ಸೆ ಕೊಡಿಸುವಲ್ಲಿ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗಿದೆಯೇ ; ಅದಕ್ಕಾಗಿ ೨೦೧೪–೧೫ನೇ ಸಾಲಿನಲ್ಲಿ ಮೀಸಲಿಟ್ಟ ಅನುದಾನವೆಷ್ಟು ;

(ಇ) ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ ೨೦೧೪–೧೫ನೇ ಸಾಲಿನಲ್ಲಿ ಎಷ್ಟು ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ ; ಅವು ಯಾವುವು; (ತಾಲ್ಲೂಕುವಾರು, ಕೇಂದ್ರವಾರು ವಿವರ ನೀಡುವುದು)

(ಈ) ಸದರಿ ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಬಿಡುಗಡೆ ಮಾಡಿದ ಅನುದಾನವೆಷ್ಟು ; ಅದರಲ್ಲಿ ಖರ್ಚು ಮಾಡಲಾದ ಅನುದಾನವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಆಡಳಿತದಲ್ಲಿ ಪಾರದರ್ಶಕತೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೫ (೫೩೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ–ಯಾವ ಇಲಾಖೆಯಲ್ಲಿ ಬಯೋ ಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಲ್ಪಿಸಲಾಗಿದೆ ; (ಇಲಾಖಾವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ಸ್ತರದ ಎಲ್ಲಾ ಇಲಾಖೆಗಳಿಗೆ ಬಯೋ ಮೆಟ್ರಿಕ್ ಹಾಜರಾತಿ ವ್ಯವಸ್ಥೆ ಶೇ.೧೦೦ ರಷ್ಟು ಅನುಷ್ಠಾನ ಗೊಳಿಸಲಾಗಿದೆಯೆ ; ಇಲ್ಲವಾದಲ್ಲಿ ಅನುಷ್ಠಾನಕ್ಕೆ ಇರುವ ತೊಡಕುಗಳೇನು ;

(ಇ) ಆಡಳಿತದಲ್ಲಿ ಪಾರದರ್ಶಕತೆ ತರುವ ಹಾಗೂ ನೌಕರರಿಗೆ ಸುರಕ್ಷತೆ ಒದಗಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿ ಮತ್ತು ಶಾಲಾ ಕಾಲೇಜುಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವುದನ್ನು ಕಡ್ಡಾಯಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಹೌದಾದಲ್ಲಿ, ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರಕಾರಕ್ಕೆ ಇರುವ ತೊಂದರೆಗಳೇನು ;

(ಉ) ರಾಜ್ಯದ ಸರಕಾರಿ ಕಛೇರಿಗಳಲ್ಲಿ ಮೂಲಭೂತ ಸೌಕರ್ಯ, ಸುರಕ್ಷತೆ ಒದಗಿಸುವುದರೊಂದಿಗೆ ಕಛೇರಿಗಳನ್ನು ಸಾರ್ವಜನಿಕ ಸ್ನೇಹಿಗೊಳಿಸುವ ಸಂಬಂಧ ಆಡಳಿತ ಸುಧಾರಣಾ ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕುಂದಾಪುರ ಪುರಸಭೆಯಲ್ಲಿ ರಿಂಗ್ ರಸ್ತೆ ನಿರ್ಮಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೬ (೧೯೬) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕುಂದಾಪುರ ಪುರಸಭೆಯ ವರಾಹಿ ನದಿ ಬದಿಯಲ್ಲಿ ನಗರೋತ್ಥಾನ ಯೋಜನೆ ಅಡಿ ರಿಂಗ್ ರಸ್ತೆ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಇದಕ್ಕೆ ತಗಲುವ ಅಂದಾಜು ಮೊತ್ತವೆಷ್ಟು ;

(ಆ) ಕುಂದಾಪುರ ಪುರಸಭೆಯ ವರಾಹಿ ನದಿ ಬದಿಯಲ್ಲಿ ರಿಂಗ್ ರಸ್ತೆ ನಿರ್ಮಿಸುವುದರಿಂದ ಕುಂದಾಪುರ ಪುರಸಭೆಯಲ್ಲಿ ವಾಹನದಟ್ಟಣೆ ಕಡಿಮೆಯಾಗಿ, ಕುಂದಾಪುರ–ಕೋಡಿ ಸಂಪರ್ಕ ಸೇತುವೆಯ ಪೂರ್ಣ ಪ್ರಮಾಣದ ಪ್ರಯೋಜನವಾಗುವುದರೊಂದಿಗೆ, ನದಿ ಭಾಗದ ಮೀನುಗಾರರಿಗೆ ಅನುಕೂಲವಾಗುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ; ಇಲ್ಲವಾದಲ್ಲಿ ಕಾರಣವೇನು?

## ದೇವಸ್ಥಾನಗಳಲ್ಲಿ ಸಿಸಿಟಿವಿಗಳನ್ನು ಅಳವಡಿಸುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭ (೫೪೪) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೦೩ ವರ್ಷಗಳಿಂದ ಮುಜರಾಯಿ ಇಲಾಖೆಗೆ ಸಂಬಂಧಪಟ್ಟ ಪುರಾತನ ದೇವಸ್ಥಾನಗಳಲ್ಲಿ ಕಳ್ಳತನವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ಕಳ್ಳತನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಎಷ್ಟು ಸಿಬ್ಬಂದಿಗಳ ಮೇಲೆ ಸರ್ಕಾರವು ಕ್ರಮಕೈಗೊಂಡಿದೆ ; ಹಾಗೂ ಇನ್ನು ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಈ ರೀತಿಯ ಕಳ್ಳತನ ಪ್ರಕರಣಗಳು ನಡೆಯದಂತೆ ಎಲ್ಲಾ ದೇವಸ್ಥಾನಗಳಲ್ಲಿ ಸಿಸಿಟಿವಿಗಳನ್ನು ಅಳವಡಿಸಿ ಭದ್ರತಾ ಸಿಬ್ಬಂದಿಗಳನ್ನು ಹೆಚ್ಚಿಸಿ ಪುರಾತನ ದೇವಸ್ಥಾನಕ್ಕೆ ಸಂಬಂಧಪಟ್ಟ ವಿಗ್ರಹ ಮತ್ತು ಆಭರಣಗಳ ರಕ್ಷಣೆಗೆ ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮ (೪೮೫) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಪಶು ವೈದ್ಯಕೀಯ ಆಸ್ಪತ್ರೆಗಳು ಎಷ್ಟು ; ಈ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಮತ್ತು ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿ ಕೆಲವೊಂದು ತಾಲ್ಲೂಕು, ಹೋಬಳಿ ಮಟ್ಟದಲ್ಲಿ ಪಶು ಆಸ್ಪತ್ರೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ದೇವಸ್ಥಾನಗಳಲ್ಲಿ ಆನೆಗಳ ನಿರ್ವಹಣೆ ಕುರಿತು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೫೯ (೧೯೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಟ್ಟ ಎಷ್ಟು ದೇವಸ್ಥಾನಗಳಲ್ಲಿ ಆನೆಗಳನ್ನು ಸಾಕಲಾಗಿದೆ ;

(ಆ) ಸದರಿ ಆನೆಗಳ ನಿರ್ವಹಣೆಗಾಗಿ ಮಾಹೆಯಾನ ಖರ್ಚಾಗುತ್ತಿರುವ ಹಣ ಎಷ್ಟು ; (ಆರೋಗ್ಯ ತಪಾಸಣೆ ಒಳಗೊಂಡಂತೆ ವಿವರ ಒದಗಿಸುವುದು) ಅವುಗಳಿಗೆ ಒದಗಿಸಲಾಗುತ್ತಿರುವ ಊಟದ ಪ್ರಮಾಣ ಹಾಗೂ ವಿವರ ಒದಗಿಸುವುದು ;

(ಇ) ದೇವಳದ ಆವರಣದಲ್ಲಿ ಆನೆಗಳಿಗೆ ತಂಗಲು ಶೆಡ್‌ಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ, ದೇವಸ್ಥಾನವಾರು ಶೆಡ್‌ನ ವಿಸ್ತೀರ್ಣವಾರು ವಿವರ ನೀಡುವುದು ;

(ಈ) ಆನೆಗಳು ರಾತ್ರಿ ವೇಳೆ ವಿಶ್ರಮಿಸಲು ಅನುವಾಗುವಂತೆ ಸರಪಳಿಗಳನ್ನು ತೆಗೆದಿಡಲಾಗಿರುತ್ತದೆಯೇ ?

**ರಾಜ್ಯದಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಪ್ರಕರಣಗಳು**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೦ (೪೫೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದವರ ವಿರುದ್ಧ ಪಾಕ್ಸೋ ಕಾಯ್ದೆಯಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಶೇಷ ನ್ಯಾಯಾಲಯಗಳಲ್ಲಿ ದಾಖಲಾದ ಎಷ್ಟು ಪ್ರಕರಣಗಳಲ್ಲಿ ಅಪಾದಿತರ ಮೇಲೆ ಆರೋಪ ಪಟ್ಟಿ ಸಲ್ಲಿಸಲಾಗಿದೆ ;

(ಇ) ಈವರೆಗೂ ದಾಖಲಾದ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ತೀರ್ಪು ನೀಡಲಾಗಿದೆ ; ಆರೋಪಿಗಳಿಗೆ ಶಿಕ್ಷೆಯಾಗಿರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪ್ರಕರಣವಾರು ಮಾಹಿತಿ ನೀಡುವುದು)

(ಈ) ಕಾಯ್ದೆಗೆ ಸರಿಯಾದ ಪ್ರಚಾರ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಉ) ದೌರ್ಜನ್ಯಕ್ಕೊಳಗಾದ / ಅತ್ಯಾಚಾರಕ್ಕೊಳಗಾದ ಮಕ್ಕಳ ಪುನರ್ವಸತಿ ಮತ್ತು ಮುಂದಿನ ಭವಿಷ್ಯದ ಬಗ್ಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. , ಪ್ರತಿಗಳು 1500